# **ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,**

# **ಟಿ. ನರಸೀಪುರ.**

## **ಸಿ. ಸಿ ನಂ. 1799/2022**

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿತರು : 1. ಸತೀಶ ಕೆ @ ಸತೀಶ್ ಕೆ
ಬಿನ್.ಕೃಷ್ಣಪ್ಪ, 30 ವರ್ಷ,

2. ಶರಣ್ ಕುಮಾರ್ ಜೆ
ಬಿನ್ ಜಯರಾಮ್ ರಾವ್, 30 ವರ್ಷ,

ಇಬ್ಬರ ವಾಸಃ ಹಿಟ್ಟುವಳ್ಳಿ ಗ್ರಾಮ,
ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

3. ಮಹದೇವಸ್ವಾಮಿ @ ಬಂಗಾರಿ **(ಮೃತ ಪಟ್ಟಿರುತ್ತಾರೆ)**

## **ದೋಷಾರೋಪಣೆ**

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿಃ 09.01.2022 ರಂದು ರಾತ್ರಿ 1.30 ಗಂಟೆಯ ಸಮಯದಲ್ಲಿ ಟಿ.ನರಸೀಪುರ ತಾಲ್ಲೂಕು ಬನ್ನೂರು ಪೊಲೀಸ್ ಠಾಣಾ ಸರಹದ್ದು ರಂಗನಾಥಪುರ ಗ್ರಾಮದಲ್ಲಿರುವ ಪಿರ್ಯಾದಿ ಚಾಸಾ-1 ಶರತ್ ಚಂದ್ರರವರ ಬಾಬ್ತು ಸರ್ವೆ ನಂಬರ್ 83/3 ರಲ್ಲಿರುವ ಕೋಳಿ ಫಾರಂ ಗೆ ಹಾಕಿದ್ದ ಬೀಗವನ್ನು ಆರೋಪಿತರಾದ ನೀವು ಹೊಡೆದು ಒಳ ಪ್ರವೇಶಿಸಿ ಕಳ್ಳತನ ಮಾಡಿದ್ದು, ಆ ಮೂಲಕ 1 ಮತ್ತು 2 ನೇ ಆರೋಪಿತರಾದ ನೀವು ಭಾರತೀಯ ದಂಡ

ಸಂಹಿತೆ ಕಲಂ.457 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, 1 ಮತ್ತು 2 ನೇ ಆರೋಪಿತರಾದ ನೀವು ಕೋಳಿ ಫಾರಂ ಗೆ ಹಾಕಿದ್ದ ಬೀಗವನ್ನು 1 ಮತ್ತು 2 ನೇ ಆರೋಪಿತರಾದ ನೀವು ಹೊಡೆದು ಒಳ ಹೋಗಿ ಅಲ್ಲಿ ಇದ್ದ 45 ಕೋಳಿ ಫೀಡ್ಸ್ ಮೂಟೆಗಳ ಪೈಕಿ 19 ಕೋಳಿ ಫೀಡ್ಸ್ ಮೂಟೆಗಳನ್ನು 3 ನೇ ಆರೋಪಿರವರ ಬಾಬ್ತು ಗೂಡ್ಸ್ ಆಟೋ ಸಂಖ್ಯೆ ಕೆಎ–55–2548 ರಲ್ಲಿ ಕಳ್ಳತನ ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.380 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ 06.01.2026.

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## ಆರೋಪಿತರ ಹೇಳಿಕೆ

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ 1 ನೇ ಆರೋಪಿಃ

2 ನೇ ಆರೋಪಿಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿತರ ಸಹಿ**

1 ನೇ ಆರೋಪಿಃ

2 ನೇ ಆರೋಪಿಃ